Prl. C.J. & J.M.F.C, Tarikere. OS No.383/2017
DW-1

**(ದಿಃ 04.11.2025 ರ ಮಧ್ಯಂತರ ಅರ್ಜಿ ಸಂಖ್ಯೆ 10 ಮತ್ತು 11 ರ ಮೇಲೆ ಆದ ಆದೇಶದ ಅನ್ವಯ)**

**ಸಾಕ್ಷಿಗೆ ದಿನಾಂಕಃ12-01-2026 ರಂದು ಪುನಃ ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**:: ಮುಂದುವರೆದ ಪಾಟೀ ಸವಾಲು :: ವಾದಿ ಪರ ಶ್ರೀ. ARK ವಕೀಲರಿಂದ ::**

ನಾನು ಈ ದಾವೆಯಲ್ಲಿ ಹಾಜರುಪಡಿಸಿರುವ ದಾಖಲೆಗಳ ಬಗ್ಗೆ ನನಗೆ ಸಂಪೂರ್ಣ ಮಾಹಿತಿ ಇರುತ್ತದೆ. ನನ್ನ ಮೊದಲನೇ ಗಂಡನ ಹೆಸರು ದಾಖಲಾತಿಗಳ ಪ್ರಕಾರ ಶಿವಕುಮಾರ್ ಆಗಿರುತ್ತದೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಅವರನ್ನು ಕುಮಾರ್ ಎಂದು ಸಹ ಕರೆಯುತ್ತಿದ್ದರು ಎಂದು ನುಡಿಯುತ್ತಾರೆ. ನಿಡಿ1 ರಲ್ಲಿ ಜಯಲಕ್ಷ್ಮಿ ಕೋಂ ಕುಮಾರ ಎಂದು ನಮೂದಾಗಿರುತ್ತದೆ ಎಂದರೆ ಸರಿ. ಅದೇ ರೀತಿ ನಿಡಿ2 ರಿಂದ 7 ರಲ್ಲೂ ಸಹ ನನ್ನ ಗಂಡನ ಹೆಸರು ಕುಮಾರ್ ಎಂದು ನಮೂದು ಇರುತ್ತದೆ ಎಂದರೆ ಸರಿ. ನಿಡಿ9 ರಿಂದ 12 ದಾಖಲೆ ದಾವಾ ಶೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟಿದ್ದಾಗಿರುವುದಿಲ್ಲ ಎಂದರೆ ಸರಿಯಲ್ಲ. ನನ್ನ ಗಂಡನ ಹೆಸರನ್ನು ಶಿವಕುಮಾರ್ ಆಗಿದ್ದರು ನಾನು ದುರುದ್ದೇಶದಿಂದ ನನಗೆ ಸಂಬಂಧದ ದಾಖಲೆಗಳನ್ನು ನ್ಯಾಯಾಲಯದಲ್ಲಿ ಹಾಜರುಪಡಿಸಿ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ನನ್ನ ದಾಖಲಾತಿಗಳಿಗೂ ಹಾಗೂ ದಾವಾ ಶೆಡ್ಯೂಲ್ ಸ್ವತ್ತಿಗೂ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ.

**:: ಮರು ವಿಚಾರಣೆ ಇಲ್ಲ ::**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

sd/-

ಪ್ರಧಾನ ಸಿ.ಜೆ ಮತ್ತು ಜೆ.ಎಂ.ಎಫ್.ಸಿ

ತರೀಕೆರೆ.

ಸಾಕ್ಷಿಯ ಸಹಿ: